ಮೂಲ ದಾವಾ ಸಂಖ್ಯೆ . 48/2016 ಡಿ ಡಬ್ಲ್ಯೂ 1

(ದಿನಾಂಕ 17-09-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ ಸಿ ಬಿ ಆರ್ ವಕೀಲರಿಂದಃ-

ನಾನು ನನ್ನ ಮುಖ್ಯ ವಿಚಾರಣಾ ಸಾಕ್ಷ್ಯದ ಕುರಿತು ನ್ಯಾಯಾಲಯದ ಮುಂದೆ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಇರುತ್ತದೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ಖಾತೆ ನಂ.1 ಕ್ಕೆ ಸಂಬಂಧಿಸಿದ 3 ಕರ ಆಕರಣೆಯ ಯಾದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-2 ರಿಂದ 4 ಎಂದು, ಪಿ ಡಿ ಓ, ಕಡಲಬಾಳು ಇವರಿಗೆ ನೀಡಿದ ಅರ್ಜಿಯ ಸ್ವೀಕೃತಿ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಡಿ-5 ಎಂದು, 3 ತೆರಿಗೆ ಪಾವತಿ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-6 ರಿಂದ 8 ಎಂದು, ಒಂದು ಸಿ ಡಿ ಹಾಜರುಪಡಿಸಿದ್ದು ಅದನ್ನು ನಿಡಿ-9 ಎಂದು, ಮನೆ ಮಂಜೂರಾತಿ ಆದೇಶ ಪತ್ರ ಹಾಜರುಪಡಿಸಿದ್ದು ಅದನ್ನು ನಿಡಿ-10 ಎಂದು, ಸಾಮಾನ್ಯ ಸಭೆ ನಂ.2013-14 ರ ನಡಾವಳಿ ಹಾಜರುಪಡಿಸಿದ್ದು ಅದನ್ನು ನಿಡಿ-11 ಎಂದು, ಕಡಲಬಾಳು ಗ್ರಾಮ ಪಂಚಾಯತ್ ಇವರು ನೀಡಿರುವ ನೋಟೀಸಿನ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಡಿ-12 ಎಂದು, ದಿಃ 10-02-2016 ಮತ್ತು 05-02-2016 ರಂದು ಸದರಿ ಗ್ರಾಮ ಪಂಚಾಯ್ತಿಯವರು ನೀಡಿರುವಂತಹ ನೋಟೀಸುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-13 ಮತ್ತು 14 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ